# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ | : | 986 (1056) |
| ಸದಸ್ಯರ ಹೆಸರು | : | ಶ್ರೀ ಎನ್. ರವಿಕುಮಾರ್ (ವಿಧಾನ ಸಭಾ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 16.12.2025 |
| ಉತ್ತರಿಸುವ ಸಚಿವರು | : | ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು. |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಕಲಬುರಗಿಯಲ್ಲಿ ವಿಮಾನ ನಿಲ್ದಾಣ ಸ್ಥಾಪನೆಗೊಂಡಿರುವುದು ಸರ್ಕಾರದ ಗಮನದಲ್ಲಿದೆಯೇ; | ಕಲಬುರಗಿ ವಿಮಾನ ನಿಲ್ದಾಣವನ್ನು ರಾಜ್ಯ ಸರ್ಕಾರವು ಅಭಿವೃದ್ಧಿಪಡಿಸಿದ್ದು, ದಿನಾಂಕ: 22.11.2019 ರಿಂದ ಪ್ರಾರಂಭವಾಗಿರುತ್ತದೆ. ರಾಜ್ಯ ಸರ್ಕಾರವು ದಿನಾಂಕ: 24.08.2019ರಂದು ಮಾಡಿಕೊಂಡಿರುವ ಒಪ್ಪಂದದಂತೆ ಭಾರತೀಯ ವಿಮಾನ ನಿಲ್ದಾಣ ಪ್ರಾಧಿಕಾರಕ್ಕೆ (Airports Authority of India-AAI) ವಿಮಾನ ನಿಲ್ದಾಣವನ್ನು ಎಲ್ಲಾ ಮೂಲಸೌಲಭ್ಯಗಳೊಂದಿಗೆ ಹಸ್ತಾಂತರಿಸಿದೆ. |
| (ಆ) | ಇದ್ದಲ್ಲಿ, ವಿಮಾನ ನಿಲ್ದಾಣ ಪ್ರಾರಂಭಗೊಂಡಾಗ ಕಲಬುರಗಿಯಿಂದ ಯಾವ ಯಾವ ಮಾರ್ಗಗಳಲ್ಲಿ ವಿಮಾನ ಹಾರಾಟ ನಡೆಸಲಾಗುತ್ತಿತ್ತು; | ಕಲಬುರಗಿ ವಿಮಾನ ನಿಲ್ದಾಣವು ಕೇಂದ್ರ ಸರ್ಕಾರದ ಪ್ರಾದೇಶಿಕ ಸಂಪರ್ಕ ಯೋಜನೆಯ 3ನೇ ಸುತ್ತಿನ ಬಿಡ್ಡಿಂಗ್ ಪ್ರಕ್ರಿಯೆಯಲ್ಲಿ ಆಯ್ಕೆಯಾಗಿರುತ್ತದೆ. ಸದರಿ ಬಿಡ್ಡಿಂಗ್ ಪ್ರಕ್ರಿಯೆಯಲ್ಲಿ ಆಯ್ಕೆಯಾದ ವಿಮಾನಯಾನ ಮಾರ್ಗಗಳು ಕೆಳಕಂಡಂತಿವೆ.<br><br>**ಕ್ರ ಸಂ** / **RCS ಮಾರ್ಗ** / **ವಿಮಾನಯಾನ ನಿರ್ವಾಹಕ ಸಂಸ್ಥೆಗಳು**<br>1 / Bangalore - Kalaburgi - Bangalore / Ghodawat (Star Air)<br>2 / Bangalore - Kalaburgi - Bangalore / Alliance Air<br>3 / Hindan - Kalaburgi - Hindan / Ghodawat (Star Air)<br>4 / Tirupati -Kalaburgi - Tirupati / Ghodawat (Star Air) |
| (ಇ) | ಕಲಬುರಗಿ ಹಾಗೂ ಬೀದರ್ ವಿಮಾನ ನಿಲ್ದಾಣಗಳನ್ನು ಉಡಾನ್ ಯೋಜನೆಯಡಿಯಲ್ಲಿ ಸ್ಥಾಪನೆ ಮಾಡಲಾಗಿತ್ತೇ; ಹಾಗಿದ್ದಲ್ಲಿ, ಉಡಾನ್ ಯೋಜನೆಯ ಸಂಪೂರ್ಣ ವಿವರಗಳನ್ನು ಒದಗಿಸುವುದು; | ಬೀದರ್ ವಿಮಾನ ನಿಲ್ದಾಣವನ್ನು ಉಡಾನ್ ಯೋಜನೆಯಡಿಯಲ್ಲಿ ಸ್ಥಾಪಿಸಲಾಗಿರುತ್ತದೆ. ಬೀದರ್ ವಿಮಾನ ನಿಲ್ದಾಣವು ಕೇಂದ್ರ ಸರ್ಕಾರದ ರಕ್ಷಣಾ ಇಲಾಖೆಯ ವಿಮಾನ ನಿಲ್ದಾಣವಾಗಿದ್ದು ಸಿವಿಲ್ ಎನ್‌ಕ್ಲೇವ್‌ಅನ್ನು ರಾಜ್ಯ ಸರ್ಕಾರವು ತನ್ನ ಸ್ವಂತ ಅನುದಾನವಾದ ರೂ.13.53 ಕೋಟಿ ವೆಚ್ಚದಲ್ಲಿ 2020ರಲ್ಲಿ ಅಭಿವೃದ್ಧಿಪಡಿಸಲಾಗಿದೆ. ಸದರಿ ವೆಚ್ಚದಲ್ಲಿ ರೂ.12.20 ಕೋಟಿಗಳನ್ನು ಉಡಾನ್ ಯೋಜನೆಯಡಿಯಲ್ಲಿ ರಾಜ್ಯ ಸರ್ಕಾರಕ್ಕೆ ಕೇಂದ್ರ ಸರ್ಕಾರವು ಮರು ಪಾವತಿಸಿದೆ.<br><br>ಕಲಬುರಗಿ ವಿಮಾನ ನಿಲ್ದಾಣವನ್ನು ರಾಜ್ಯ ಸರ್ಕಾರವು ತನ್ನ ಸ್ವಂತ ಅನುದಾನದಿಂದ ಅಭಿವೃದ್ಧಿಪಡಿಸಿರುತ್ತದೆ. ಲೋಕೋಪಯೋಗಿ ಇಲಾಖೆಯ ಮುಖಾಂತರ ರೂ. 175.57 ಕೋಟಿ ವೆಚ್ಚದಲ್ಲಿ 2019ರಲ್ಲಿ ನಿರ್ಮಾಣ ಮಾಡಲಾಗಿರುತ್ತದೆ. |

| | | |
|---|---|---|
| (ಈ) | ಕಲಬುರಗಿ ವಿಮಾನ ನಿಲ್ದಾಣದಿಂದ ಎಲ್ಲಾ ಸೇವೆಗಳು ಸ್ಥಗಿತವಾಗಲು ಕಾರಣವೇನು; | ಕಲಬುರಗಿ ವಿಮಾನ ನಿಲ್ದಾಣದಿಂದ ಪ್ರಯಾಣಿಸುವ ಪ್ರಯಾಣಿಕರ ಬೇಡಿಕೆಯು ಕಡಿಮೆಯಾದ ಕಾರಣ ವಿಮಾನಯಾನ ಸೇವೆಯನ್ನು ಸ್ಥಗಿತಗೊಳಿಸಲಾಗಿದೆ. |
| (ಉ) | ಬೀದರ್ ವಿಮಾನ ನಿಲ್ದಾಣ ಯೋಜನೆಯಡಿಯಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯಿಂದ ಹಣಕಾಸಿನ ಸಹಾಯ ನೀಡಲಾಗುತ್ತಿದೆಯೇ; ಇದ್ದಲ್ಲಿ, ಈ ಕುರಿತು ಸಂಪೂರ್ಣ ಮಾಹಿತಿ ಒದಗಿಸುವುದು; ಹಾಗೂ ಕಲಬುರಗಿಗೂ ಸದರಿ ಸೌಲಭ್ಯವನ್ನು ವಿಸ್ತರಿಸುವ ಯೋಚನೆ ಸರ್ಕಾರದ ಮುಂದಿದೆಯೇ; ಮಾಹಿತಿ ನೀಡುವುದು; | ಬೆಂಗಳೂರು-ಬೀದರ್-ಬೆಂಗಳೂರು ಮಾರ್ಗದಲ್ಲಿ ವಿಮಾನಯಾನ ಕಾರ್ಯಾಚರಣೆಯನ್ನು ಒಂದು ವರ್ಷದ ಅವಧಿಗೆ ನಡೆಸಲು ಈ ಹಿಂದೆ Regional Connectivity Scheme (RCS) ಯೋಜನೆಯಡಿ ನೀಡಲಾಗುತ್ತಿದ್ದ ವರ್ಷಕ್ಕೆ ರೂ.13.48 ಕೋಟಿಗಳ ಪೂರ್ಣ ಪ್ರಮಾಣದ ಆರ್ಥಿಕ ಬೆಂಬಲ ನೀಡಲು ದಿನಾಂಕ: 05.11.2024 ರಂದು ಸರ್ಕಾರವು ಆದೇಶವನ್ನು ಹೊರಡಿಸಿರುತ್ತದೆ.<br><br>ಬೀದರ್ ವಿಮಾನ ನಿಲ್ದಾಣದಿಂದ ಬೆಂಗಳೂರು-ಬೀದರ್-ಬೆಂಗಳೂರು ಮಾರ್ಗವಾಗಿ ವಿಮಾನಯಾನ ಕಾರ್ಯಾಚರಣೆ ಕೈಗೊಳ್ಳಲು ಅಗತ್ಯವಾದ ಅನುದಾನವನ್ನು ಕೆಕೆಆರ್‌ಡಿಬಿ ವತಿಯಿಂದ 70% ಸಹಾಯಧನ ಪಡೆಯುವ ಷರತ್ತಿಗೊಳಪಟ್ಟು ಒಂದು ವರ್ಷದ ಅವಧಿಗೆ ನೀಡಲು ಹಾಗೂ ಉಳಿದ 30% ಅನುದಾನವನ್ನು ಮೂಲಸೌಲಭ್ಯ ಅಭಿವೃದ್ಧಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆಯ ಲೆಕ್ಕಶೀರ್ಷಿಕೆ "3451-00-090-1-18-059- ಪ್ರಾದೇಶಿಕ ವಾಯು ಸಂಪರ್ಕ–ಇತರೆ ಖರ್ಚುಗಳು"ಗೆ ಒದಗಿಸಲು ಅನುಮೋದನೆಯಾಗಿರುತ್ತದೆ.<br><br>ಕಲಬುರಗಿ-ಬೆಂಗಳೂರು ಮಾರ್ಗದ ವಿಮಾನಯಾನ ಸೇವೆಗೆ ಮೇಲೆ ವಿವರಿಸಿರುವ ಸೌಲಭ್ಯವನ್ನು ವಿಸ್ತರಿಸುವ ಯಾವುದೇ ಪ್ರಸ್ತಾವನೆಗಳು ಇರುವುದಿಲ್ಲ. |
| (ಊ) | ಕಲಬುರಗಿ ವಿಮಾನ ನಿಲ್ದಾಣದಿಂದ ಮತ್ತೆ ಯಾವ ಕಾಲಮಿತಿಯಲ್ಲಿ ಸೇವೆ ಆರಂಭಿಸಲಾಗುವುದು? | ಬೆಂಗಳೂರು-ಕಲಬುರಗಿ ಮಾರ್ಗದಲ್ಲಿ ಪ್ರಸ್ತುತ ಕಾರ್ಯಾಚರಣೆ ಸ್ಥಗಿತಗೊಳಿಸಿರುವ ಸಂಸ್ಥೆಯಿಂದ ವಿಮಾನಯಾನ ಸೇವೆಯನ್ನು ಮುಂದುವರೆಸಲು ಇಲ್ಲವೇ ಪ್ರಾದೇಶಿಕ ಸಂಪರ್ಕ ಯೋಜನೆಯ ಅಡಿಯಲ್ಲಿ ಇತರ ಅರ್ಹ ನಿರ್ವಾಹಕರಿಂದ ಹೊಸದಾಗಿ ಬಿಡ್‌ಗಳನ್ನು ಆಹ್ವಾನಿಸುವಂತೆ ಕೋರಿ ಕೇಂದ್ರ ಸರ್ಕಾರಕ್ಕೆ ದಿನಾಂಕ: 26.10.2025 ರಂದು ಪತ್ರ ಬರೆಯಲಾಗಿದೆ. |

**ಸಂಖ್ಯೆ: ಮೂಅಇ 259 ರಾಅವಿ 2025**

**(ಎಂ.ಬಿ. ಪಾಟೀಲ)**
ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ
ಮೂಲಸೌಲಭ್ಯ ಅಭಿವೃದ್ಧಿ ಸಚಿವರು